ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಬೀದರ್ ಜಿಲ್ಲೆಯ ನೀರಾವರಿ ಕಾಮಗಾರಿಗಳ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-

371(464) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ಜಲಸಂಪನ್ಮೂಲ ಇಲಾಖೆಯ ವತಿಯಿಂದ ಎಸ್‌ಸಿಪಿ / ಟಿಎಸ್‌ಪಿ ಯೋಜನೆಯಡಿ ಬೀದರ್ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು ; (ಲೆಕ್ಕಶೀರ್ಷಿಕೆಗಳೊಂದಿಗೆ ಸ್ಪಷ್ಟ ಮಾಹಿತಿ ಒದಗಿಸುವುದು)

(ಆ) ಮಂಜೂರಾದ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಹಾಗೂ ಅವು ಯಾವ ಹಂತದಲ್ಲಿದೆ ; (ವಿಧಾನ ಸಭಾ ಕ್ಷೇತ್ರವಾರು, ವರ್ಷವಾರು, ಕಾಮಗಾರಿವಾರು ಗುತ್ತಿಗೆದಾರೊಂದಿಗೆ ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಪೂರ್ಣಗೊಂಡ ಕಾಮಗಾರಿಗಳು ಮತ್ತು ಬಳಕೆಯಾದ ಅನುದಾನ ಎಷ್ಟು ; (ಮಾಹಿತಿ ನೀಡುವುದು)

(ಈ) ಈ ಯೋಜನೆಯಡಿ ಅಪೂರ್ಣಗೊಂಡ ಕಾಮಗಾರಿಗಳು ಯಾವುವು ? (ವಿಧಾನ ಸಭಾ ಕ್ಷೇತ್ರವಾರು ಸ್ಪಷ್ಟ ಮಾಹಿತಿ ನೀಡುವುದು)